ಕರ್ನಾಟಕ ಸರ್ಕಾರ

ಸಹಕಾರಚುನಾವಣಾ ಪ್ರಾಧಿಕಾರ

3ನೇ ಮಹಡಿ, ಟಿ.ಟಿ.ಎಂ.ಸಿ.ಕಟ್ಟಡ "ಎ"ಬ್ಲಾಕ್,
ಶಾಂತಿನಗರ, ಬೆಂಗಳೂರು-560027

ವಿಷಯ: ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997 ರ ಕಲಂ 26 ಎ ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004 ನಿಯಮ 2(ಜಿ-2) ರಂತೆ ದಿನಾಂಕ 01.01.2020ರಿಂದ 31.12.2020ರವರೆಗೆ ಪದಾವಧಿ ಮುಗಿಯಲಿರುವ/ ಆಕಸ್ಮಿಕವಾಗಿ ತೆರವಾಗುವ ಸ್ಥಾನಗಳಿಗೆ/ ಹೊಸದಾಗಿ ನೋಂದಣಿಯಾಗುವ ಎಲ್ಲಾ ರೀತಿಯ ಸಹಕಾರಿಗಳ ಆಡಳಿತ ಮಂಡಲಿ ಚುನಾವಣೆ ನಡೆಸಲು ಚುನಾವಣಾಧಿಕಾರಿಗಳನ್ನು ನೇಮಕಾತಿ ಮಾಡುವ ಬಗ್ಗೆ.

ಉಲ್ಲೇಖ: ಸಹಕಾರ ಚುನಾವಣಾ ಪ್ರಾಧಿಕಾರದ ಆದೇಶ ಸಂಖ್ಯೆ:ಸಚುಪ್ರಾ/ ಪ್ರಾಸಂಚು/43/2018-19, ದಿನಾಂಕ:29/09/2018.

★★★

## ಪ್ರಸ್ತಾವನೆ

ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004 (2015ರ ತಿದ್ದುಪಡಿ)ರ ನಿಯಮ 2(ಜಿ-2) ಪ್ರದತ್ತವಾದ ಅಧಿಕಾರದಂತೆ, 2020ನೇ ಸಾಲಿನಲ್ಲಿ ಅಂದರೆ ದಿನಾಂಕ: 01.01.2020 ರಿಂದ 31.12.2020 ರವರೆಗೆ ಆಡಳಿತ ಮಂಡಲಿ ಪದಾವಧಿ ಮುಕ್ತಾಯವಾಗಲಿರುವ ಸಹಕಾರಿಗಳ ಆಡಳಿತ ಮಂಡಲಿಯ ಸದಸ್ಯರ, ಸಾಮಾನ್ಯ, ಆಕಸ್ಮಿಕವಾಗಿ ಖಾಲಿಬಿದ್ದ ಸ್ಥಾನ ಮತ್ತು ಹೊಸದಾಗಿ ನೋಂದಣಿಯಾದ ಸಹಕಾರಿಗಳಿಗೆ ಆಡಳಿತ ಮಂಡಲಿ ಚುನಾವಣೆ/ ತತ್ಪರಿಣಾಮ ಪದಾಧಿಕಾರಿಗಳ ಚುನಾವಣೆ ನಡೆಸಲು ಚುನಾವಣಾಧಿಕಾರಿಗಳನ್ನು ನೇಮಿಸಬೇಕಾಗಿರುತ್ತದೆ.

ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004 (2015ರ ತಿದ್ದುಪಡಿ)ರ ನಿಯಮ 2(ಜಿ-2) ರಂತೆ ಸಹಕಾರಿಗಳ ಆಡಳಿತ ಮಂಡಳಿಯ ಸಾಮಾನ್ಯ ಚುನಾವಣೆ ಮತ್ತು ಪದಾಧಿಕಾರಿಗಳ ಚುನಾವಣೆ, ಹೊಸದಾಗಿ ನೋಂದಣಿಯಾದ, ಆಕಸ್ಮಿಕವಾಗಿ ತೆರವಾದ ನಿರ್ದೇಶಕರ ಸ್ಥಾನಗಳಿಗೆ / ವಿಶೇಷಾಧಿಕಾರಿ ನೇಮಕಗೊಂಡ ಸಹಕಾರಿಗಳ ಆಡಳಿತ ಮಂಡಲಿ ಚುನಾವಣೆಗಳನ್ನು ನಡೆಸಲು ಚುನಾವಣಾಧಿಕಾರಿಗಳನ್ನು ನೇಮಕಾತಿ ಮಾಡಿ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

## ಆ ದೇ ಶ

ಸಂಖ್ಯೆ: ಸಚುಪ್ರಾ/ಆಡಳಿತ/ಪ್ರಾಸಚು/ 05/2019-20 ದಿನಾಂಕ: 30.09.2019

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004 (2015ರ ತಿದ್ದುಪಡಿ) ನಿಯಮ 2(ಜಿ-2) ರಂತೆ ಸಹಕಾರ ಚುನಾವಣಾ ಪ್ರಾಧಿಕಾರಕ್ಕೆ ದತ್ತವಾಗಿರುವ

ಅಧಿಕಾರವನ್ನು ಚಲಾಯಿಸಿ, ಡಾ. ಎನ್.ಎಸ್. ಚನ್ನಪ್ಪಗೌಡ, ಆಯುಕ್ತರು, ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು ಆದ ನಾನು ನಿಯಮ 5–ಎ ರಂತೆ ಆಯಾ ಜಿಲ್ಲೆಯಲ್ಲಿ ನೊಂದಣಿಯಾಗಿರುವ ಎಲ್ಲಾ ಸಹಕಾರಿಗಳ ಆಡಳಿತ ಮಂಡಲಿಯ ಸಾಮಾನ್ಯ ಚುನಾವಣೆ ಮತ್ತು ಪದಾಧಿಕಾರಿಗಳ ಚುನಾವಣೆ, ಹೊಸದಾಗಿ ನೋಂದಣಿಯಾದ ಸಹಕಾರಿಗಳ ಆಡಳಿತ ಮಂಡಲಿ ಚುನಾವಣೆ, ಆಕಸ್ಮಿಕವಾಗಿ ತೆರವಾದ ನಿರ್ದೇಶಕರ ಸ್ಥಾನಗಳಿಗೆ ಮತ್ತು ವಿಶೇಷಾಧಿಕಾರಿ ನೇಮಕಗೊಂಡ ಸಹಕಾರಿಗಳ ಆಡಳಿತ ಮಂಡಲಿ ಚುನಾವಣೆಗಳನ್ನು ನಡೆಸಲು ಈ ಕೆಳಕಂಡ ಅಧಿಕಾರಿಗಳನ್ನು ಕೋಷ್ಟಕದಲ್ಲಿ ತಿಳಿಸಿರುವ ಜಿಲ್ಲೆಗಳಿಗೆ ಚುನಾವಣಾಧಿಕಾರಿಗಳನ್ನಾಗಿ ದಿನಾಂಕ 01.01.2020 ರಿಂದ 31.12.2020ರವರೆಗೆ ನೇಮಕಾತಿ ಮಾಡಿ ಆದೇಶಿಸಿರುತ್ತೇನೆ.

| ಕ್ರ. ಸಂ. | ಜಿಲ್ಲೆಯ ಹೆಸರು | ಚುನಾವಣಾಧಿಕಾರಿಯಾಗಿ ನೇಮಿಸಲ್ಪಟ್ಟ ಅಧಿಕಾರಿ |
|---|---|---|
| 1 | ಬೆಂಗಳೂರು ನಗರ ಜಿಲ್ಲೆ ಮತ್ತು ಬೆಂಗಳೂರು (ಗ್ರಾ) | ಸಹಕಾರ ಸಂಘಗಳ ಜಂಟಿ ನಿಬಂಧಕರು (ಪಟ್ಟಣ ಬ್ಯಾಂಕುಗಳ ವಿಭಾಗ) ಕೇಂದ್ರ ಕಛೇರಿ, ಬೆಂಗಳೂರು, ಸಹಕಾರ ಸಂಘಗಳ ನಿಬಂಧಕರ ಕಛೇರಿ, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು |
| 2 | ರಾಮನಗರ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ರಾಮನಗರ ಜಿಲ್ಲೆ |
| 3 | ತುಮಕೂರು | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕರು, ತುಮಕೂರು ಜಿಲ್ಲೆ |
| 4 | ಚಿತ್ರದುರ್ಗ ಮತ್ತು ದಾವಣಗೆರೆ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ಚಿತ್ರದುರ್ಗ ಜಿಲ್ಲೆ |
| 5 | ಕೋಲಾರ ಮತ್ತು ಚಿಕ್ಕಬಳ್ಳಾಪುರ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ಚಿಕ್ಕಬಳ್ಳಾಪುರ ಜಿಲ್ಲೆ |
| 6 | ಶಿವಮೊಗ್ಗ | ಸಹಕಾರ ಸಂಘಗಳ ಅಪರ ನಿಬಂಧಕರು, ಕಾಡಾ ಶಿವಮೊಗ್ಗ |
| 7 | ಮೈಸೂರು, ಚಾಮರಾಜನಗರ, ಮಂಡ್ಯ, ಕೊಡಗು | ಸಹಕಾರ ಸಂಘಗಳ ಜಂಟಿ ನಿಬಂಧಕರು, ಕಾಡಾ, ಮೈಸೂರು |
| 8 | ಹಾಸನ ಮತ್ತು ಚಿಕ್ಕಮಗಳೂರು | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕರು, ಹಾಸನ |

| ಕ್ರ. ಸಂ. | ಜಿಲ್ಲೆಯ ಹೆಸರು | ಚುನಾವಣಾಧಿಕಾರಿಯಾಗಿ ನೇಮಿಸಲ್ಪಟ್ಟ ಅಧಿಕಾರಿ |
|---|---|---|
| 9 | ದಕ್ಷಿಣ ಕನ್ನಡ ಮತ್ತು ಉಡುಪಿ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ಮಂಗಳೂರು |
| 10 | ಬೆಳಗಾವಿ | ಸಹಕಾರ ಸಂಘಗಳ ಜಂಟಿ ನಿಬಂಧಕರು, ಕಾಡಾ, ಬೆಳಗಾವಿ |
| 11 | ವಿಜಯಪುರ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ವಿಜಯಪುರ ಜಿಲ್ಲೆ |
| 12 | ಬಾಗಲಕೋಟ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕರು, ಬಾಗಲಕೋಟ ಜಿಲ್ಲೆ |
| 13 | ಧಾರವಾಡ ಮತ್ತು ಗದಗ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕರು, ಧಾರವಾಡ ಜಿಲ್ಲೆ |
| 14 | ಹಾವೇರಿ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ಹಾವೇರಿ ಜಿಲ್ಲೆ |
| 15 | ಉತ್ತರ ಕನ್ನಡ ಜಿಲ್ಲೆ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ಉತ್ತರ ಕನ್ನಡ ಜಿಲ್ಲೆ |
| 16 | ಗುಲ್ಬರ್ಗಾ, ರಾಯಚೂರು ಮತ್ತು ಯಾದಗಿರಿ | ಸಹಕಾರ ಸಂಘಗಳ ಜಂಟಿ ನಿಬಂಧಕರು ಕಾಡಾ, ಭೀಮರಾಯನಗುಡಿ |
| 17 | ಬೀದರ್ | ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ, ಗುಲ್ಬರ್ಗಾ |
| 18 | ಬಳ್ಳಾರಿ ಮತ್ತು ಕೊಪ್ಪಳ | ಸಹಕಾರ ಸಂಘಗಳ ಜಂಟಿ ನಿಬಂಧಕರು, ಕಾಡಾ ಮುನಿರಾಬಾದ್ |

**ವಿಶೇಷ ಸೂಚನೆ:–** ಅಧಿಕಾರ ಪ್ರತ್ಯಾಯೋಜನೆಯಂತೆ ಮೇಲಿನ ಕೋಷ್ಠಕದಲ್ಲಿ ಹಂಚಿಕೆ ಮಾಡಲಾಗಿರುವ ಎಲ್ಲಾ ವಿಧದ ಸೌಹಾರ್ದ ಸಹಕಾರಿಗಳ ಚುನಾವಣೆ ಸಂಬಂಧಿಸಿದಂತೆ ಚುನಾವಣಾಧಿಕಾರಿಗಳನ್ನು ಸೂಚಿಸದೆ ಇದ್ದಲ್ಲಿ (ಅಂತಹ ಸಹಕಾರಿಗಳು ಕೈತಪ್ಪಿ ಹೋಗಿದ್ದರೆ) ಅಂತಹ ಸಹಕಾರಿಗಳ ಚುನಾವಣೆಯನ್ನು ಜರುಗಿಸುವ ಸಂಬಂಧ, ಸಂಬಂಧಪಟ್ಟ ಜಿಲ್ಲಾ ಉಪ ನಿಬಂಧಕರು ಕೂಡಲೇ ಪ್ರಾಧಿಕಾರದ ಗಮನಕ್ಕೆ ತರಲು ಸೂಚಿಸಿದೆ.

ಚುನಾವಣಾಧಿಕಾರಿಗಳು ಅವರ ಕಾರ್ಯವ್ಯಾಪ್ತಿಗೆ ಬರುವಂತಹ ಸಹಕಾರಿಗಳ ಚುನಾವಣೆಯನ್ನು ಮತ್ತು ತತ್ಪರಿಣಾಮದ ಪದಾಧಿಕಾರಿಗಳ ಚುನಾವಣೆ ಹಾಗೂ ಪ್ರಾಧಿಕಾರದಿಂದ ಕಾಲಕಾಲಕ್ಕೆ ನೀಡಲಾದ ಸುತ್ತೋಲೆ, ಅಧಿಸೂಚನೆ ಆದೇಶ ಮತ್ತು ಮಾರ್ಗಸೂಚಿಗಳನ್ನು, (ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮಗಳು ಮತ್ತು ನಿಯಮಾನುಸಾರ) ಅನುಸರಿಸಿ ನಿಷ್ಪಕ್ಷಪಾತವಾಗಿ ಚುನಾವಣೆ ನಡೆಸಲು ಆದೇಶಿಸಿದೆ.

ಮೇಲೆ ತಿಳಿಸಿದಂತೆ ನೇಮಿಸಲ್ಪಟ್ಟ ಜಿಲ್ಲಾ ಚುನಾವಣಾಧಿಕಾರಿಗಳು ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004 (2015ರ ತಿದ್ದುಪಡಿ)ರ ನಿಯಮ 5-ಎ ರಂತೆ ದಿನಾಂಕ:1-1-2020 ರಿಂದ 31-12-2020ರವರೆಗೆ ನಡೆಯಬೇಕಾಗಿರುವ ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸೌಹಾರ್ದ ಸಹಕಾರಿಗಳ ಚುನಾವಣೆಯನ್ನು ಹಾಲಿ ಇರುವ ಆಡಳಿತ ಮಂಡಲಿ ಅವಧಿ ಮುಗಿಯುವ 15 ದಿನಗಳ ಮುಂಚಿತವಾಗಿ ಚುನಾವಣೆ ಪ್ರಕ್ರಿಯೆ ಮುಗಿಯುವಂತೆ ಕ್ರಮ ಕೈಗೊಳ್ಳತಕ್ಕದ್ದು.

(ಡಾ.ಎನ್.ಎಸ್. ಚನ್ನಪ್ಪಗೌಡ)
ಆಯುಕ್ತರು
ಸಹಕಾರಚುನಾವಣಾ ಪ್ರಾಧಿಕಾರ,
ಬೆಂಗಳೂರು.

ಪ್ರತಿಗಳನ್ನು ಈ ಕೆಳಕಂಡವರುಗಳಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ :-

1. ನಿರ್ದೇಶಕರು, ಸರ್ಕಾರಿ ಕೇಂದ್ರ ಮುದ್ರಣಾಲಯ, ಕೆಂಗೇರಿ, ಬೆಂಗಳೂರು ಇವರಿಗೆ ಮುಂದಿನ ಕರ್ನಾಟಕರಾಜ್ಯ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ ಕಳುಹಿಸಿದೆ.
2. ಸಹಕಾರ ಸಂಘಗಳ ಅಪರ ನಿಬಂಧಕರು, (ಪತ್ತು), (ಕೈಗಾರಿಕೆ ಮತ್ತು ಹೈನುಗಾರಿಕೆ), (ವಸತಿ ಮತ್ತುಇತರೆ), (ಬಳಕೆ ಮತ್ತು ಮಾರಾಟ), ಸಹಕಾರ ಸಂಘಗಳ ನಿಬಂಧಕರಕಛೇರಿ, ನಂ.1, ಆಲಿ ಆಸ್ಕರ್‌ರಸ್ತೆ, ಬೆಂಗಳೂರು
3. ರಾಜ್ಯದ ಎಲ್ಲಾ ಪ್ರಾಂತೀಯ ಸಹಕಾರ ಸಂಘಗಳ ಜಂಟಿ ನಿಬಂಧಕರು.
4. ಸಹಕಾರ ಸಂಘಗಳ ಜಂಟಿ ನಿಬಂಧಕರು (ಪಟ್ಟಣ ಬ್ಯಾಂಕುಗಳ ವಿಭಾಗ), (ಕಾನೂನು ಕೋಶ), ಸಹಕಾರ ಸಂಘಗಳ ನಿಬಂಧಕರ ಕಛೇರಿ, ನಂ.1, ಆಲಿ ಆಸ್ಕರ್‌ರಸ್ತೆ, ಬೆಂಗಳೂರು
5. ಸಹಕಾರ ಸಂಘಗಳ ಜಂಟಿ ನಿಬಂಧಕರು, ಕಾಡಾ, ಮೈಸೂರು
6. ಸಹಕಾರ ಸಂಘಗಳ ಅಪರ ನಿಬಂಧಕರು, ಕಾಡಾ, ಶಿವಮೊಗ್ಗ
7. ಸಹಕಾರ ಸಂಘಗಳ ಜಂಟಿ ನಿಬಂಧಕರು, ಕಾಡಾ, ಬೆಳಗಾವಿ
8. ಸಹಕಾರ ಸಂಘಗಳ ಜಂಟಿ ನಿಬಂಧಕರು, ಕಾಡಾ, ಕಲಬುರಗಿ
9. ಸಹಕಾರ ಸಂಘಗಳ ಜಂಟಿ ನಿಬಂಧಕರು, ಭೀಮರಾಯನಗುಡಿ
10. ಸಹಕಾರ ಸಂಘಗಳ ಜಂಟಿ ನಿಬಂಧಕರು, ಮುನಿರಾಬಾದ್
11. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕರು, ತುಮಕೂರು
12. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕರು, ಹಾಸನ
13. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ರಾಮನಗರ ಜಿಲ್ಲೆ
14. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ಚಿತ್ರದುರ್ಗ ಜಿಲ್ಲೆ
15. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ಚಿಕ್ಕಬಳ್ಳಾಪುರ ಜಿಲ್ಲೆ
16. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು
17. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕರು, ವಿಜಯಪುರ ಜಿಲ್ಲೆ
18. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕರು, ಬಾಗಲಕೋಟ ಜಿಲ್ಲೆ
19. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ಧಾರವಾಡ ಜಿಲ್ಲೆ
20. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ಹಾವೇರಿ ಜಿಲ್ಲೆ
21. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ಉತ್ತರ ಕನ್ನಡ ಜಿಲ್ಲೆ

22. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪ ನಿರ್ದೇಶಕರು, ಗುಲ್ಬರ್ಗಾ ಜಿಲ್ಲೆ
23. ರಾಜ್ಯದ ಎಲ್ಲಾ ಜಿಲ್ಲೆಗಳ ಸಹಕಾರ ಸಂಘಗಳ ಉಪ ನಿಬಂಧಕರು

ಪ್ರತಿಗಳನ್ನು ಈ ಕೆಳಕಂಡವರುಗಳಿಗೆ ಮಾಹಿತಿಗಾಗಿ ಕಳುಹಿಸಿದೆ :-

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಹಕಾರ ಇಲಾಖೆ, ಬಹುಮಹಡಿಗಳ ಕಟ್ಟಡ, 6ನೇ ಮಹಡಿ, ಬೆಂಗಳೂರು-01.
2. ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ನಂ.1, ಅಲಿ ಆಸ್ಕರ್‌ರಸ್ತೆ, ಬೆಂಗಳೂರು-52.
3. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರು, ನಂ.17, ಜಯನಿವಾಸ, ಶಂಕರಮಠ ರಸ್ತೆ, ಬಸವನಗುಡಿ, ಬೆಂಗಳೂರು.
4. ರಾಜ್ಯ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ
5. ರಾಜ್ಯ ಎಲ್ಲಾ ಜಿಲ್ಲೆಗಳ ಆರಕ್ಷಕ ಅಧೀಕ್ಷಕರಿಗೆ
6. ರಾಜ್ಯದ ಎಲ್ಲಾ ಉಪವಿಭಾಗಗಳ ಸಹಕಾರ ಸಂಘಗಳ ಸಹಾಯಕ ನಿಬಂಧಕರುಗಳಿಗೆ.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತ, ರೇಸ್‌ಕೋರ್ಸ್‌ರಸ್ತೆ, ಬೆಂಗಳೂರು ಇವರಿಗೆ ಮುಂದಿನ ಸಹಕಾರ ವಾರ ಪತ್ರಿಕೆಯಲ್ಲಿ ಪ್ರಕಟಿಸುವ ಸಲುವಾಗಿ.
8. ವ್ಯವಸ್ಥಾಪಕ ನಿರ್ದೇಶಕರು, ಸೌಹಾರ್ದ ಸಹಕಾರಿಗಳ ಮಹಾಮಂಡಳ ನಿ., ಬೆಂಗಳೂರು.
9. ಪ್ರಾಧಿಕಾರದ ಅಧಿಕಾರಿ / ಸಿಬ್ಬಂದಿ / ರಕ್ಷಣಾಕಡತಕ್ಕೆ.